**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಂ ನಾಗರಾಜು ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯವನ್ನು ಉತ್ತರಿಸುವ ಬಗ್ಗೆ**

**ವಿಷಯ:**

ದಿನಾಂಕ: 12.08.2025 ರಂದು "ಶಿಥಿಲ ಕೊಠಡಿ ಶಾಲೆಗ ಮಕ್ಕಳನ್ನು ಕಳುಹಿಸದ ಪೋಷಕರು" ಎಂದು ಆಂದೋಲನ ದಿನ ಪತ್ರಿಕೆಯಲ್ಲಿ ಸುದ್ದಿ ಪ್ರಕಟವಾಗಿರುತ್ತದೆ. "ಚಾಮರಾಜನಗರ ಜಿಲ್ಲೆ ಹನೂರು ತಾಲ್ಲೂಕಿನಲ್ಲಿ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿನ ಕೊಠಡಿಗಳು ಶಿಥಿಲಾವಸ್ಥೆಯಲ್ಲಿ ಇರುವುದರಿಂದ ಶಾಲಾ ಕೊಠಡಿಗಳು ದುರಸ್ಥಿಯಾಗುವವರಗೂ ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸುವುದಿಲ್ಲ ಎಂದು ಪೋಷಕರು ಸಾಮೂಹಿಕವಾಗಿ ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸದಿರುವ ಘಟನೆ ತಾಲ್ಲೂಕಿನ ಪೆದ್ದನಪಾಳ್ಯ ಗ್ರಾಮದಲ್ಲಿ ನಡೆದಿದೆ. ತಾಲ್ಲೂಕಿನ ಕೂಡ್ಲೂರು ಕ್ಲಸ್ಟರ್ ವ್ಯಾಪ್ತಿಯ ಪೆದ್ದನಪಾಳ್ಯ ಗ್ರಾಮದ ಸರ್ಕಾರಿ ಶಾಲೆಯಲ್ಲಿ 1ನೇ ತರಗತಿಯಿಂದ 7ನೇ ತರಗತಿಯವರೆಗೆ 62 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಗ್ರಾಮದ ಸರ್ಕಾರಿ ಶಾಲೆಯಲ್ಲಿನ ಒಂದಲ್ಲ ಒಂದು ಅವಾಂತರಗಳಿಂದ ಪೋಷಕರು ಬೇಸತ್ತು ಹಲವಾರು ಬಾರಿ ಪ್ರತಿಭಟನೆಯನ್ನು ನಡೆಸಿದ್ದಾರೆ. ಕಳೆದ 4 ದಿನಗಳಿಂದ ಸತತವಾಗಿ ಮಳೆಯಾಗುತ್ತಿರುವುದರಿಂದ ಕೊಠಡಿಗಳು ಶಿಥಿಲವಾಗಿರುವುದರಿಂದ ಮಳೆಯ ನೀರು ಸೋರುತ್ತಿದ್ದು, ಕಾಂಕ್ರೀಟ್ ಗಾರೆ ಚೂರುಗಳು ಕಳಗ ಬೀಳುತ್ತಿವೆ. ಆದರೂ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳದಿರುವುದರಿಂದ ಪ್ರತಿನಿತ್ಯ ವಿದ್ಯಾರ್ಥಿಗಳು ಸಂಕಷ್ಟದಲ್ಲಿಯೇ ಪಾಠ ಕೇಳುವಂತಾಗಿದೆ" ಎಂದು ದಿನಪತ್ರಿಕೆಯಲ್ಲಿ ಪ್ರಕಟವಾಗಿದ್ದು, ಈ ಬಗ್ಗೆ ಇಲಾಖೆಯ ವತಿಯಿಂದ ಕೈಗೊಂಡಿರುವ ಕ್ರಮದ ಬಗ್ಗೆ ಹಾಗೂ ರಾಜ್ಯದಲ್ಲಿ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ಎಂಬುದರ ಬಗ್ಗೆ ಮಾಹಿತಿ ನೀಡಲು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರನ್ನು ಶೂನ್ಯ ವೇಳೆಯಲ್ಲಿ ಒತ್ತಾಯಿಸುತ್ತೇನೆ.

**ಉತ್ತರ:**

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಪೆದ್ದನಪಾಳ್ಯ ಹನೂರು ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇಲ್ಲಿ 2003 ರಲ್ಲಿ ಶ್ರೀ ಮಾರ್ಕಾಂಡ ಬಿನ್ ಲೇಟ್ ಪೊನ್ನುಸ್ವಾಮಿ, ಪೆದ್ದನಪಾಳ್ಯ ಗ್ರಾಮರವರು ದಿನಾಂಕ:31.03.2003 ರಲ್ಲಿ 40 ಸೆಂಟ್ ಜಾಗವನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗ ಬರೆದುಕೊಟ್ಟಿದ್ದು, ಅದೇ ಸ್ಥಳದಲ್ಲಿ ಜಿಲ್ಲಾ ಪಂಚಾಯಿತಿ ವತಿಯಿಂದ ಐದು ಶಾಲಾ ಕೊಠಡಿಗಳು ನಿರ್ಮಾಣಗೊಂಡು ಇಲ್ಲಿಯ ತನಕ ಶಾಲೆಯು ನಡೆದುಕೊಂಡು ಬಂದಿರುತ್ತದೆ. ಈ ಮಧ್ಯೆ ಶ್ರೀ ಮಾರ್ಕಾಂಡರವರ ಮಕ್ಕಳಾದ ಶ್ರೀ ಮಣಿ ಸ್ವೆಲ್ವಿ ಇತರರು ಕೋರ್ಟ್‌ನಲ್ಲಿ ದಾವೆ ಹೂಡಿದ್ದು, ಈ ಜಾಗವು ಪಿತ್ರಾರ್ಜಿತವಾದ್ದುದು ನಮ್ಮಗೆ ಗೊತ್ತಿಲ್ಲದೇ ನಮ್ಮ ತಂದೆ ಶಾಲೆಯ ಹೆಸರಿಗ ನೀಡಿರುತ್ತಾರೆ ಎಂದು ತಕರಾರು ಮಾಡಿ ಶಾಲೆಗೆ ರಿಪೇರಿ ಅಥವಾ ಇನ್ನಿತರ ಯಾವುದೇ ಕಾಮಗಾರಿ ನಡೆಸದಂತೆ ಸಿಜೆಎಂ ಹನೂರು ಕೋರ್ಟ್‌ನಲ್ಲಿ ತಡೆಯಾಜ್ಞೆ ತಂದಿರುತ್ತಾರೆ. ಆದಕಾರಣ ಸಣ್ಣಪುಟ್ಟ ರಿಪೇರಿ, ಇನ್ನಿತರ ಮೂಲಭೂತ ಸೌಲಭ್ಯ ಕಲ್ಪಿಸಲು ಅಡಚಣೆ ಉಂಟು ಮಾಡಿದ್ದು, ದಿನಾಂಕ:11.08.2025 ರಿಂದ ಶಾಲೆಗೆ ಮಕ್ಕಳನ್ನು ಕಳುಹಿಸುವುದಿಲ್ಲ ಎಂದು ಪೋಷಕರು ತೀರ್ಮಾನ ತೆಗೆದುಕೊಂಡಿದ್ದು, ಈ

ಸಂಬಂಧ ಶಾಲೆಗೆ ಭೇಟಿ ನೀಡಿ ಪ್ರೋಷಕರೊಂದಿಗೆ ಚರ್ಚಿಸಿದಾಗಿಯೂ ಸಫಲವಾಗಿರುವುದಿಲ್ಲ. ಮುಂದುವರೆದು, ಇದೇ ತಡೆಯಾಜ್ಞೆ ತೆರವುಗೊಳಿಸಲು ಸಂಬಂಧಿಸಿದ ಸರ್ಕಾರಿ ವಕೀಲರನ್ನು ಭೇಟಿ ಮಾಡಿ, ಸಂಬಂಧಿಸಿದ ದಾಖಲೆಗಳಾದ ಇ-ಸ್ವತ್ತು ಡಿಮೆಂಡ್ ರಿಜಿಸ್ಟರ್ ಕಾಪಿ ಮತ್ತು ಈ ಇಪ್ಪತ್ತೆರಡು ವರ್ಷಗಳಿಂದ ಇದೇ ಸ್ಥಳದಲ್ಲಿ ಶಾಲೆ ನಡೆದಿರುವ ಬಗ್ಗೆ ದೃಢೀಕರಣ ಮಾಹಿತಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಸರ್ಕಾರಿ ವಕೀಲರಿಗೆ ಸಲ್ಲಿಸಿದ್ದು, ತುರ್ತಾಗಿ ಘನ ನ್ಯಾಯಾಲಯಕ್ಕೆ ಸಲ್ಲಿಸುವ ಪ್ರಕ್ರಿಯೆಯಲ್ಲಿರುತ್ತದೆ

**ಸಂಖ್ಯೆ: ಇಪಿ 248 ಯೋಸಕ 2025**

(ಎಸ್. ಮಧು ಬಂಗಾರಪ್ಪ)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**